ರೇಷ್ಮೆ ಉದ್ಯಮ ಕೋಶದ ರೇಷ್ಮೆ ಉಪ ನಿರ್ದೇಶಕರ ಕಾರ್ಯ ವೈಖರಿ

2089 (2315) ಶ್ರೀ ಗುರುಸ್ವಾಮಿ ವಿ.ಎಸ್. (ಚಾಮುಂಡೇಶ್ವರಿ): ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರೇಷ್ಮೆ ಇಲಾಖೆಯು, ರೇಷ್ಮೆ ಉದ್ಯಮ ಕೋಶದಲ್ಲಿ, ಉಪ ನಿರ್ದೇಶಕರು, ಸರ್ಕಾರಿ ರೇಷ್ಮೆ ಕಾರ್ಖಾನೆಯ ಆಡಳಿತ ನಿಯಂತ್ರಣ ಸರಿಯಾಗಿ ನಿರ್ವಹಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಅಧಿಕಾರಿಗಳು ಇಲ್ಲಿಯವರೆವಿಗೂ ಯಾವುದೇ ರೇಷ್ಮೆ ಕಾರ್ಖಾನೆಗೆ ನಿರೀಕ್ಷಿತ ಹಾಗೂ ಅನಿರೀಕ್ಷಿತ ಭೇಟಿ ನೀಡಿ ಆಡಳಿತ ಸುಧಾರಣೆ ಬಗ್ಗೆ ವರದಿಗಳೇನಾದರೂ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ರೇಷ್ಮೆ ಉಪ ನಿರ್ದೇಶಕರು, ಆಡಳಿತ ಸರಿಯಾಗಿ ನಿರ್ವಹಿಸದಿಲ್ಲದ್ದರಿಂದ ಸರ್ಕಾರಿ ರೇಷ್ಮೆ ಕಾರ್ಖಾನೆಗಳು ಹೆಚ್ಚಿನ ನಷ್ಟ ಅನುಭವಿಸುತ್ತಿರುವುದು ನಿಜವಲ್ಲವೆ;

ಈ) ಹಾಗಿದ್ದಲ್ಲಿ, ಈ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ಸದರಿಯವರ ಬದಲಿಗೆ ದಕ್ಷ ಉಪ ನಿರ್ದೇಶಕರನ್ನು ನೇಮಿಸಲಾಗುವುದೇ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು):

ಅ) ಇಲ್ಲ.

ಆ) ಇಲಾಖಾ ಮುಖ್ಯಸ್ಥರಾದ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರ ಮೌಖಿಕ : ಲಿಖಿತ ಆದೇಶಗಳಂತೆ ಆಗಿಂದ್ದಾಗ್ಗೆ ಸರ್ಕಾರಿ ರೇಷ್ಮೆ ಕಾರ್ಖಾನೆಗಳಿಗೆ ಭೇಟಿ ನೀಡಿ ಅಲ್ಲಿನ ಆಡಳಿತ ನಿರ್ವಹಣೆಯ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದಿರುತ್ತಾರೆ.

ಇ) ಸರ್ಕಾರಿ ರೇಷ್ಮೆ ಕಾರ್ಖಾನೆಗಳ ನಷ್ಟಕ್ಕೆ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ರೇಷ್ಮೆ ಉಪ ನಿರ್ದೇಶಕರ ಆಡಳಿತ ವೈಖರಿಯು ಕಾರಣವಲ್ಲ.

ಈ) ಕ್ರಮ ತೆಗೆದುಕೊಳ್ಳಬೇಕಾದ ಅಗತ್ಯವಿರುವುದಿಲ್ಲ.

ಮೈಸೂರು ಜಿಲ್ಲೆಯಲ್ಲಿ ಪಶುಪಾಲನಾ ಇಲಾಖೆಗೆ ಅವಧಿ ಮೀರಿದ ಔಷಧಿ ಸರಬರಾಜು

2090 (2507) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 11-10-99ರ ನಂತರ ಮೈಸೂರು ಜಿಲ್ಲೆಯಲ್ಲಿ ಪಶುಪಾಲನಾ ಇಲಾಖೆಗೆ ಸರಬರಾಜು ಮಾಡಿದ ಅವಧಿ ಮುಗಿದ ಔಷಧಿಗಳ ಪ್ರಕರಣ ಎಷ್ಟು;

ಆ) ಇವುಗಳಲ್ಲಿ ಎಷ್ಟು ಪ್ರಕರಣಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ;

ಇ) ಎಷ್ಟು ಪ್ರಕರಣಗಳ ದಂಡ ವಿಧಿಸಲಾಗಿದೆ; ವಸೂಲಾದ ದಂಡ ಎಷ್ಟು;

ಈ) ಎಷ್ಟು ಸಂಸ್ಥೆಗಳನ್ನು ಕಪ್ಪು ಪಟ್ಟಿಗೆ ಸೇರಿಸಲಾಗಿದೆ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಯಾವುದೇ ಪ್ರಕರಣವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) "ಅ" ಕ್ಕೆ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.